# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಉತ್ತರ ಕನ್ನಡ ಕಾರವಾರ-581 301

**OFFICE OF THE DEPUTY COMMISSIONER, UTTARA KANNADA DISTRICT, KARWAR, -581 301**

ದೂರವಾಣಿ / Telephone : 08382 226406, 226471, 08382 226603 (Fax)

Email: dckarwar@gmail.com

Website: http://uttara kannada.nic.in


ಸಂ. ಜಿಲ್ಲಾಧಿಕಾರಿಗಳು/ಕಾರವಾರ/ಪ್ಲಾಸ್ಟಿಕ್/ 2023-24/

ದಿನಾಂಕ: 11-01-2024

**ವಿಷಯ:** ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಗೋಕರ್ಣ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಏಕ ಬಳಕೆಯ ಪ್ಲಾಸ್ಟಿಕ್ (SUP) ವಸ್ತುಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸುವ ಸೂಚನೆ ಮತ್ತು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳ ಅನುಸರಣೆ, 2021 ಬಗ್ಗೆ.

**ಉಲ್ಲೇಖ:** 1. ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರಸಚಿವಾಲಯ ಅಧಿಸೂಚನೆ ದಿನಾಂಕ: 11-03-2016.

2. ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF & CC) ನವದೆಹಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳು, 2021 ರ ಅಧಿಸೂಚನೆ [G.S.R.No. 571 (E)] ದಿನಾಂಕ: 12 ನೇ ಅಗಸ್ಟ್, 2021.

****

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ FEE 17 EPC 2012, ದಿನಾಂಕ: 11-03-2016 ರ ಪ್ರಕಾರ ಕೆಳಗಿನ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳನ್ನು 11.03.2016 ರಿಂದ ಈಗಾಗಲೇ ನಿಷೇಧಿಸಲಾಗಿದೆ. ಅಂದರೆ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳು, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕಾಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸನಿಂದ ತಯಾರಾದಂತಹ ವಸ್ತುಗಳನ್ನು ನಿಷೇಧಿಸಲಾಗಿದೆ ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (MoEF & CC) ನವದೆಹಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳು, 2021 ರಲ್ಲಿ ಮೇಲಿನ ನಿಷೇಧಿತ ಉತ್ಪನ್ನಗಳ ಜೊತೆಗೆ ಕೆಳಗಿನ ಹೆಚ್ಚುವರಿ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳನ್ನು 1 ನೇ ಜುಲೈ 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಿ ದಿನಾಂಕ: 12 ನೇ ಅಗಸ್ಟ್, 2021 ರಂದು ಅಧಿಸೂಚನೆ (G.S.R.No. 571 (E)) ಯನ್ನು ಹೊರಡಿಸಿದೆ.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು, 2016 ರ ನಿಯಮ 4(2) ರ ಪ್ರಕಾರ (ತಿದ್ದುಪಡಿ), "ಪಾಲಿಸ್ಟೈರೀನ್ ಮತ್ತು ವಿಸ್ತರಿತ ಪಾಲಿಸ್ಟೈರೀನ್ ಸೇರಿದಂತೆ ಕೆಳಗಿನ ಏಕ ಬಳಕೆಯ ಪ್ಲಾಸ್ಟಿಕ್ (SUP) ತಯಾರಿಕೆ, ಆಮದು, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಜುಲೈ 1, 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ.

(ಎ) ಪ್ಲಾಸ್ಟಿಕ್ ಸ್ಟಿಕ್‌ಗಳೊಂದಿಗೆ ಇಯರ್ ಬಡ್‌ಗಳು, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್‌ಗಳು, ಪ್ಲಾಸ್ಟಿಕ್ ಧ್ವಜಗಳು, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್‌ಗಳು, ಪ್ಲಾಸ್ಟಿಕ್ ಐಸ್‌ಕ್ರೀಮ್ ಸ್ಟಿಕ್‌ಗಳು, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೈರೀನ್ (ಥರ್ಮಾಕೋಲ್).

(ಬ).ಪ್ಲಾಸ್ಟಿಕ್ ಪ್ಲೇಟ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಮತ್ತು ಲೋಟಗಳು, ಫೋರ್ಕ್‌ಗಳು, ಪ್ಲಾಸ್ಟಿಕ್ ಚಮಚಗಳು, ಪ್ಲಾಸ್ಟಿಕ್ ಚಾಕುಗಳು, ಪ್ಲಾಸ್ಟಿಕ್ ಟ್ರೇಗಳಂತಹ ಕಟ್ಲರಿಗಳು, ಸ್ವೀಟ್ ಬಾಕ್ಸ್‌ಗಳ ಸುತ್ತ ಸುತ್ತುವ ಅಥವಾ ಪ್ಯಾಕಿಂಗ್ ಫಿಲ್ಮಗಳು, ಆಮಂತ್ರಣ ಪತ್ರಗಳು ಮತ್ತು ಸಿಗರೇಟ್ ಪ್ಯಾಕೇಟ್‌ಗಳು, 100 ಮೈಕ್ರಾನ್‌ಗಿಂತ ಕಡಿಮೆ ದಪ್ಪದ ಪ್ಲಾಸಿಕ್ ಅಥವಾ PVC ಬ್ಯಾನರ್‌ಗಳು, ಪ್ಲಾಸ್ಟಿಕ್ ಸ್ಟಿರರ್‌ಗಳು.

.....2....

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ((MoEF & CC)) ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ಟೈಮ್‌ಲೈನ್‌ಗಳ ಪ್ರಕಾರ ಮೇಲಿನ ಎಲ್ಲಾ ವಸ್ತುಗಳ ಉತ್ಪಾದಕರು, ದಾಸ್ತಾನುದಾರರು, ಚಿಲ್ಲರೆ ವ್ಯಾಪಾರಿಗಳು, ಅಂಗಡಿ ಮಾಲೀಕರುಗಳು, ಇ-ಕಾಮರ್ಸ್ ಕಂಪನಿಗಳು, ಬೀದಿ ವ್ಯಾಪಾರಿಗಳು, ವಾಣಿಜ್ಯ ಸಂಸ್ಥೆಗಳು (ಮಾಲ್‌ಗಳು / ಮಾರುಕಟ್ಟೆ ಸ್ಥಳ / ಶಾಪಿಂಗ್ ಕೇಂದ್ರಗಳು / ಸಿನಿಮಾ ಮನೆಗಳು / ಪ್ರವಾಸೋದ್ಯಮ ಸ್ಥಳಗಳು/ ಶಾಲೆಗಳು / ಕಾಲೇಜುಗಳು, ಕಛೇರಿ ಸಂಕೀರ್ಣಗಳು / ಆಸ್ಪತ್ರೆಗಳು, ಇತರೆ ಸಂಸ್ಥೆಗಳು ಮತ್ತು ಸಾಮಾನ್ಯ ಸಾರ್ವಜನಿಕರಿಗೆ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಕಟ್ಟುನಿಟ್ಟಾಗಿ ನಿಲ್ಲಿಸುವಂತೆ ಈಗಾಗಲೇ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಮುಂದುವರೆದು, ಗೋಕರ್ಣ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಸಂಖ್ಯೆಯು ದಿನೇದಿನೇ ಹೆಚ್ಚುತ್ತಿದ್ದು, ಅತಿಯಾದ ಪ್ಲಾಸ್ಟಿಕ್ ಬಳಕೆಯಿಂದ ಪ್ಲಾಸ್ಟಿಕ್ ಕಸದ ರಾಶಿಗಳು ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಕಂಡು ಬಂದಿದ್ದು, ಇದನ್ನು ಸಂಗ್ರಹಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡುತ್ತಿಲ್ಲದ ಕಾರಣ ತ್ಯಾಜ್ಯಗಳಿಂದ ಪರಿಸರಕ್ಕೆ ಹಾನಿಯಾಗುವುದನ್ನು ಮನಗಂಡು ಗೋಕರ್ಣ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಈ ಕೆಳಗಿನಂತೆ ನಿಷೇದಿಸಿ ಆದೇಶಿಸಲಾಗಿದೆ.

## ಆದೇಶ

ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಗೋಕರ್ಣ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಈ ಮೇಲಿನ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ನಿಟ್ಟಿನಲ್ಲಿ ಹಾಗೂ ಪರಿಸರ ಮಾಲಿನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ ಏಕ ಬಳಕೆಯ ಪ್ಲಾಸ್ಟಿಕ್ ಉಪಯೋಗವನ್ನು ಸಂಪೂರ್ಣವಾಗಿ ನಿಷೇಧಿಸಿ ಹಾಗೂ ಗೋಕರ್ಣ ಗ್ರಾಮವನ್ನು ಪ್ಲಾಸ್ಟಿಕ್ ಮುಕ್ತ ವಲಯ ಮಾಡಬೇಕೆಂದು ಈ ಮೂಲಕ ಆದೇಶಿಸಲಾಗಿದೆ.

ಜಿಲ್ಲಾಧಿಕಾರಿ
ಉತ್ತರ ಕನ್ನಡ, ಕಾರವಾರ

ಇವರಿಗೆ:

1. ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ, ಗೋಕರ್ಣ, ಕುಮಟಾ ಮೇಲ್ಕಂಡ ಆದೇಶವನ್ನು ಪಾಲಿಸುವಂತೆ ಸೂಚಿಸಿದೆ.
2. ತಹಶೀಲ್ದಾರರು, ಕುಮಟಾ ತಾಲೂಕು ಇವರು ಸೂಕ್ತ ಕ್ರಮ ವಹಿಸಲು ಸೂಚಿಸಿದೆ.
3. ತಾಲ್ಲೂಕಾ ಪಂಚಾಯತ, ಕುಮಟಾ ತಾಲೂಕು ಇವರು ತಮ್ಮ ಅಧೀನದಲ್ಲಿ ಬರುವ ಗ್ರಾಮ ಪಂಚಾಯತಿ ಗೋಕರ್ಣ ಇವರಿಗೆ ಮೇಲಿನ ಆದೇಶ ಪಾಲಿಸುವಂತೆ ಕ್ರಮವಹಿಸಲು ಸೂಚಿಸಿದೆ.
4. ಉಪ ನಿರ್ದೇಶಕರು, ಜಿಲ್ಲಾ ಪ್ರವಾಸೋದ್ಯಮ ಇಲಾಖೆ, ಕಾರವಾರ ಇವರು ಸೂಕ್ತ ಕ್ರಮಕ್ಕಾಗಿ ಸೂಚಿಸಿದೆ.
5. ಸಹಾಯಕ ಆಯುಕ್ತರು, ಸಹಾಯಕ ಆಯುಕ್ತರವರ ಕಛೇರಿ, ಕುಮಟಾ ಸೂಕ್ತ ಕ್ರಮವಹಿಸಲು ಸೂಚಿಸಿದೆ.

<u>ಪ್ರತಿಯನ್ನು :</u>

1. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
2. ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಕಾವವಾಲ ಇವರ ಮಾಹಿತಿಗಾಗಿ.
3. ಕಛೇರಿ ಪ್ರತಿ.